# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 395 (475)
ಸದಸ್ಯರ ಹೆಸರು : ಶ್ರೀ ಕೇಶವ ಪ್ರಸಾದ್ ಎಸ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 12.12.2024
ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 371ಜೆ ಕಲ್ಯಾಣ ಕರ್ನಾಟಕಕ್ಕೆ ಸಂಬಂಧಿಸಿದಂತೆ ಇತರೆ ಭಾಗಗಳಿಗಿಂತ ಹೆಚ್ಚಿನ ಪ್ರಮಾಣದಲ್ಲಿ ಪದೋನ್ನತಿಯನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಲ್ಯಾಣ ಕರ್ನಾಟಕಕ್ಕೆ ಎಷ್ಟು ಪ್ರಮಾಣದಲ್ಲಿ ಪದೋನ್ನತಿಯನ್ನು ನೀಡಲಾಗಿರುತ್ತದೆ (ಮಾಹಿತಿ ನೀಡುವುದು) | ಭಾರತ ಸಂವಿಧಾನದ ಅನುಚ್ಛೇಧ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರನ್ವಯ ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿರುವ ಸಿವಿಲ್ ಸೇವಾ ಹುದ್ದೆಗಳಲ್ಲಿನ ಗ್ರೂಪ್-ಎ (ಕಿರಿಯ ಶ್ರೇಣಿ) ಮತ್ತು ಗ್ರೂಪ್-ಬಿ ಹುದ್ದೆಗಳಲ್ಲಿ ಶೇ 75 ರಷ್ಟು ಹುದ್ದೆಗಳನ್ನು, ಗ್ರೂಪ್-ಸಿ ಹುದ್ದೆಗಳಲ್ಲಿ ಶೇ 80 ರಷ್ಟು, ಗ್ರೂಪ್-ಡಿ ಹುದ್ದೆಗಳಲ್ಲಿ ಶೇ 85ರಷ್ಟು ಹುದ್ದೆಗಳನ್ನು ಹಾಗೂ ರಾಜ್ಯ ಮಟ್ಟದ ಕಛೇರಿ ಮತ್ತು ಸಂಸ್ಥೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಲ್ಲಿ ಶೇ 8 ರಷ್ಟು ಹುದ್ದೆಗಳನ್ನು ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಲು ಹಾಗೂ ಈ ರೀತಿ ಮೀಸಲಿರಿಸಿದ ಹುದ್ದೆಗಳ ಪ್ರತ್ಯೇಕ ಸ್ಥಳೀಯ ವೃಂದವನ್ನು ರಚಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ರೀತಿ ಸ್ಥಳೀಯ ವೃಂದದಲ್ಲಿ ಮೀಸಲಿರಿಸುವ ಹುದ್ದೆಗಳನ್ನು ಆಯಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಪ್ರಮಾಣದಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಹುದ್ದೆಗಳನ್ನು ಗುರುತಿಸಲಾಗುತ್ತದೆ. ಮುಂಬಡ್ತಿಗಾಗಿ ನಿಗಧಿಪಡಿಸಲಾಗಿರುವ ಪ್ರಮಾಣಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಮುಂಬಡ್ತಿ ನೀಡಲು ಅವಕಾಶವಿರುವುದಿಲ್ಲ. |
| ಆ) | ಜೇಷ್ಠತಾ ಸಂಖ್ಯೆಯಲ್ಲಿ ಹಿಂದೆ ಇರುವ ನೌಕರರು ಇತರೆ ರಾಜ್ಯದ ನೌಕರರಿಗಿಂತ ಹೆಚ್ಚು ಪದೋನ್ನತಿಯನ್ನು ಹೊಂದಿರುವ ನೌಕರರ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | ಮೇಲಿನ ಆದೇಶದ ಕಂಡಿಕೆ 5(1) ರನ್ವಯ ಸ್ಥಳೀಯ ವೃಂದ ಮತ್ತು ಮಿಕ್ಕುಳಿದ ವೃಂದಗಳು ನೇರ ನೇಮಕಾತಿ, ಬಡ್ತಿ, ಜೇಷ್ಠತೆ, ನಿಯುಕ್ತಿ, ವರ್ಗಾವಣೆ ಮತ್ತು ರೋಸ್ಟರ್ ಬಿಂದುಗಳನ್ನು ಚಾಲನೆಗೊಳಿಸುವ ಉದ್ದೇಶಕ್ಕಾಗಿ ಎರಡು ಪ್ರತ್ಯೇಕ ಘಟಕಗಳಾಗಿರುತ್ತವೆ.<br><br>ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮ 2013ರ ನಿಯಮ 7(1)ರನ್ವಯ ಸಕ್ಷಮ ಪ್ರಾಧಿಕಾರಗಳು ಸ್ಥಳೀಯ ವೃಂದ ಮತ್ತು ಮಿಕ್ಕುಳಿದ ವೃಂದಗಳ ಪ್ರತ್ಯೇಕ ಜೇಷ್ಠತಾ ಪಟ್ಟಿಯನ್ನು ನಿರ್ವಹಿಸತಕ್ಕದ್ದೆಂದು ತಿಳಿಸಲಾಗಿರುವ ಹಿನ್ನೆಲೆಯಲ್ಲಿ, ಎರಡೂ ಘಟಕಗಳನ್ನು ಹೋಲಿಕೆ ಮಾಡಲು ಬರುವುದಿಲ್ಲ. |
| ಇ) | ಕಲ್ಯಾಣ ಕರ್ನಾಟಕವನ್ನು ಬಿಟ್ಟು ಉಳಿದ ಭಾಗಗಳಿಗೆ ವರ್ಗಾವಣೆಯಾಗಿ ಬಂದಿರುವ ನೌಕರರ ಸಂಖ್ಯೆ ಎಷ್ಟು; ಕಲ್ಯಾಣ ಕರ್ನಾಟಕದಲ್ಲಿ ಪದೋನ್ನತಿ ಪಡೆದ | ಸರ್ಕಾರದ ವರ್ಗಾವಣೆ ಮಾರ್ಗಸೂಚಿಗಳನ್ವಯ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸ್ಥಳನಿಯುಕ್ತಿಗೊಂಡ ಅಧಿಕಾರಿ ನೌಕರರುಗಳನ್ನು ಕನಿಷ್ಠ 10 ವರ್ಷಗಳವರೆವಿಗೂ ಕಲ್ಯಾಣ ಕರ್ನಾಟಕ ಪ್ರದೇಶ ಹೊರತುಪಡಿಸಿ ವರ್ಗಾವಣೆ ಮಾಡುವಂತಿಲ್ಲ. |

| | | |
|---|---|---|
| | ನಂತರ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ [illegible] ಕಾರಣಗಳೇನು; | ಗೆಜೆಟೆಡ್ ಹುದ್ದೆಗಳಲ್ಲಿರುವ ಸ್ಥಳೀಯ ವ್ಯಕ್ತಿಗಳು ರಾಜ್ಯದ ಯಾವುದೇ ಭಾಗದಲ್ಲಿ ಕರ್ತವ್ಯ ನಿರ್ವಹಿಸಬಹುದಾಗಿರುತ್ತದೆ. |
| ಈ) | ಕಲ್ಯಾಣ ಕರ್ನಾಟಕದಲ್ಲಿ ಪದೋನ್ನತಿ ನಿಯಮ ವರ್ಗಾವಣೆಯಾಗಿ ಬರುವುದರಿಂದ ಮತ್ತೆ ಕಲ್ಯಾಣ ಕರ್ನಾಟಕದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಹೆಚ್ಚಾಗುತ್ತಿದೆ ಮತ್ತೆ ಮತ್ತೆ ಹೆಚ್ಚಿನ ಪ್ರಮಾಣದಲ್ಲಿ ಪದೋನ್ನತಿ ಹೊಂದುತ್ತಿದ್ದು, ಈ ಬಗ್ಗೆ ಸರ್ಕಾರದ ಚಿಂತನೆಯೇನು; | ಒಂದು ಇಲಾಖೆಯಲ್ಲಿ, ಒಂದು ವೃಂದದಲ್ಲಿ ಮಂಜೂರಾಗಿರುವ ಹುದ್ದೆಗಳಲ್ಲಿ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದದಲ್ಲಿ ಹುದ್ದೆಗಳನ್ನು ಗುರುತಿಸಿ ವೃಂದ ವಿಭಜನೆಯಾದ ನಂತರದಲ್ಲಿ, ಎರಡೂ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗಷ್ಟೆ ನೇರ ನೇಮಕಾತಿ ಮಾಡಲು ಅಥವಾ ಮುಂಬಡ್ತಿ ನೀಡಲು ಸಾಧ್ಯವಿರುತ್ತದೆ. ಕಲ್ಯಾಣ ಕರ್ನಾಟಕ ಭಾಗದ ವ್ಯಕ್ತಿಗಳು ಬೇರೆ ಪ್ರದೇಶಕ್ಕೆ ವರ್ಗಾವಣೆಯಾದ ಮಾತ್ರಕ್ಕೆ ಸದರಿ ವೃಂದದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮುಂಬಡ್ತಿ ನೀಡಲು ಅವಕಾಶವಿರುವುದಿಲ್ಲ. |
| ಉ) | ಕಲ್ಯಾಣ ಕರ್ನಾಟಕ ಹೊರತುಪಡಿಸಿ ಇತರೆ ಭಾಗದ ಸರ್ಕಾರಿ ನೌಕರರಿಗೆ ಇದರಿಂದ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರಿಸುವುದು) | ಭಾರತದ ಸಂವಿಧಾನದ ಅನುಚ್ಛೇದ 371(ಜೆ)ರಡಿ ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸಲಾಗಿದ್ದು, ಇದರಿಂದ ಇತರ ಭಾಗದ ನೌಕರರಿಗೆ ಅನ್ಯಾಯವಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಿಆಸುಇ 183 ಪ್ರಕಕೋ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ